# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಹೊಸದಾಗಿ ಅಲ್ಪಸಂಖ್ಯಾತರ 20 ಮೊರಾರ್ಜಿದೇಸಾಯಿ ವಸತಿ ಶಾಲೆ, 05 ಪದವಿ ಪೂರ್ವ ಕಾಲೇಜು, 02 ಮಾದರಿ ವಸತಿ ಶಾಲೆಗಳನ್ನು ಹಾಗೂ 25 ಮೆಟ್ರಿಕ್ ನಂತರ ಬಾಲಕ/ಬಾಲಕಿಯರ ವಿದ್ಯಾರ್ಥಿ ನಿಲಯಗಳನ್ನು ತೆರೆಯಲು ಮಂಜೂರಾತಿ ನೀಡಿ ಆದೇಶ ಹೊರಡಿಸುವ ಬಗ್ಗೆ.

**ಓದಲಾಗಿದೆ:-** 1. 2017-18ನೇ ಸಾಲಿನ ಆಯವ್ಯಯ ಭಾಷಣ **ಕಂಡಿಕೆ-220(ಎ).**
2. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರು ಸಲ್ಲಿಸಿರುವ ಏಕಕಡತ ಪ್ರಸ್ತಾವನೆ ಸಂಖ್ಯೆ: ಅಸಂನಿ/ವಿನಿ/ವಶಾ/ಸಿಆರ್-172/ 2016-17 ದಿನಾಂಕ: 01-04-2017.

*~*~*~*~*~*~*

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ 2017-18ನೇ ಸಾಲಿನ ಆಯವ್ಯಯ ಭಾಷಣ **ಕಂಡಿಕೆ-220(ಎ)**ರಲ್ಲಿ **"ಹೊಸದಾಗಿ ಅಲ್ಪಸಂಖ್ಯಾತರ 20 ಮೊರಾರ್ಜಿದೇಸಾಯಿ ವಸತಿ ಶಾಲೆ, 05 ಪದವಿ ಪೂರ್ವ ಕಾಲೇಜು, 02 ಮಾದರಿ ವಸತಿ ಶಾಲೆಗಳನ್ನು ಹಾಗೂ 25 ಮೆಟ್ರಿಕ್ ನಂತರ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ತೆರೆಯಲಾಗುವುದು"** ಎಂದು ಘೋಷಿಸಿರುತ್ತಾರೆ.

ಈ ಕಾರ್ಯಕ್ರಮ ಮುಂದುವರೆದ ಕಾರ್ಯಕ್ರಮವಾಗಿದ್ದು, ರಾಜ್ಯದಲ್ಲಿ ಅಲ್ಪಸಂಖ್ಯಾತರ ಸಮುದಾಯದ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವ ನಿಟ್ಟಿನಲ್ಲಿ, ಹೊಸದಾಗಿ ಅಲ್ಪಸಂಖ್ಯಾತರ 20 ಮೊರಾರ್ಜಿದೇಸಾಯಿ ವಸತಿ ಶಾಲೆ, 05 ಪದವಿ ಪೂರ್ವ ಕಾಲೇಜು, 02 ಮಾದರಿ ವಸತಿ ಶಾಲೆಗಳನ್ನು ಹಾಗೂ 25 ಮೆಟ್ರಿಕ್ ನಂತರ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಅಗತ್ಯ ಹುದ್ದೆಗಳನ್ನು ಸೃಜಿಸಿ ಪ್ರಾರಂಭಿಸಲು ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ರವರು ಏಕಕಡತ ಪದ್ಧತಿಯಲ್ಲಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 185 ಎಂಡಿಎಸ್ 2017 ಬೆಂಗಳೂರು ದಿನಾಂಕ:24-06-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ 2017-18ನೇ ಸಾಲಿನ ಆಯವ್ಯಯ ಭಾಷಣದ **ಕಂಡಿಕೆ: 220(ಎ)ರಲ್ಲಿ** ಘೋಷಿಸಿರುವಂತೆ, ರಾಜ್ಯದಲ್ಲಿ ಅಲ್ಪಸಂಖ್ಯಾತರ ಸಮುದಾಯದ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವ ನಿಟ್ಟಿನಲ್ಲಿ, ಈ ಕೆಳಕಂಡ ಸ್ಥಳಗಳಲ್ಲಿ ಹೊಸದಾಗಿ ಅಲ್ಪಸಂಖ್ಯಾತರ 20 ಮೊರಾರ್ಜಿದೇಸಾಯಿ ವಸತಿ ಶಾಲೆ, 05 ಪದವಿ ಪೂರ್ವ ಕಾಲೇಜು, 02 ಮಾದರಿ ವಸತಿ ಶಾಲೆಗಳನ್ನು ಹಾಗೂ 25 ಮೆಟ್ರಿಕ್ ನಂತರ ಬಾಲಕ/ಬಾಲಕಿಯರ ವಿದ್ಯಾರ್ಥಿ ನಿಲಯಗಳನ್ನು ~~ತೆರೆಯಲು~~ ಕೆಳಕಂಡ ಷರತ್ತುಗಳೊಂದಿಗೆ ಪ್ರಾರಂಭಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.